ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1398

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಎನ್ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16.03.2021

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಕುಟುಂಬಗಳಿಗೆ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳನ್ನು ನೀಡಲಾಗಿದೆ;	ಮಂಡ್ಯ ಜಿಲ್ಲೆಯಲ್ಲಿ 4,49,899 ಆದ್ಯತಾ ಹಾಗೂ 49211 ಆದ್ಯತೇತರ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.
ಆ	ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳಿಂದ ಸೌಲಭ್ಯ ಪಡೆಯುತ್ತಿರುವ ಸದಸ್ಯರ ಸಂಖ್ಯೆ ಎಷ್ಟು;	ಆದ್ಯತಾ ಪಡಿತರ ಚೀಟಿಗಳಲ್ಲಿ14,32,066 ಸದಸ್ಯರು ಹಾಗೂ ಆದ್ಯತೇತರ ಪಡಿತರ ಚೀಟಿಯಲ್ಲಿ 1,67,732 ಸದಸ್ಯರು ಸಾರ್ವಜನಿಕ ಪಡಿತರ ವಿತರಣಾ ಪದ್ಧತಿಯಡಿ ವಿತರಿಸಲಾಗುವ ಪಡಿತರ ಸೌಲಭ್ಯ ಪಡೆಯುತ್ತಿದ್ದಾರೆ.
ಇ	ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿದಾರರಿಗೆ ನೀಡಲಾಗುತ್ತಿರುವ ಆಹಾರ ಧಾನ್ಯಗಳು ಯಾವುವು; ಅವುಗಳ ದರ ಹಾಗೂ ಪ್ರಮಾಣವೆಷ್ಟು;	ಪ್ರತಿ ಮಾಹೆ ಆದ್ಯತಾ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ ಹಾಗೂ ಪ್ರತಿ ಪಡಿತರ ಚೀಟಿಗೆ 2 ಕೆ.ಜಿ ಗೋಧಿ. ಅಂತ್ಯೋದಯ ಅನ್ನ ಪಡಿತರ ಚೀಟಿಗೆ 35 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಆದ್ಯತೇತರ ಪಡಿತರ ಚೀಟಿಯನ್ನು ಹೊಂದಿದ್ದು, ಆಹಾರ ಧಾನ್ಯಗಳನ್ನು ಪಡೆಯಲು ಸಹಮತಿ ನೀಡಿರುವ ಏಕ ಸದಸ್ಯ ಪಡಿತರ ಚೀಟಿಗೆ 5 ಕೆ.ಜಿ ಅಕ್ಕಿ ಹಾಗೂ ಎರಡಕ್ಕಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಗೆ 10 ಕೆ.ಜಿ ಅಕ್ಕಿಯನ್ನು ರೂ. 15/-ರ ಸಬ್ಸಿಡಿ ದರದಲ್ಲಿ ವಿತರಿಸಲಾಗುತ್ತಿದೆ.
ಈ	ಸರ್ಕಾರದ ಇದಕ್ಕೆ ಮಂಡ್ಯ ಜಿಲ್ಲೆಯಲ್ಲಿ ಖರ್ಚು ಮಾಡುತ್ತಿರುವ ಮೊತ್ತವೆಷ್ಟು ಹಾಗೂ ಇದರಲ್ಲಿ ರಾಜ್ಯ ಸರ್ಕಾರದ ಮತ್ತು ಕೇಂದ್ರ ಸರ್ಕಾರಗಳ ಪಾಲೆಷ್ಟು?	ಮಂಡ್ಯ ಜಿಲ್ಲೆಗೆ ಪಡಿತರ ಚೀಟಿದಾರರಿಗೆ ಆಹಾರ ಧಾನ್ಯಗಳ ವಿತರಣೆಗಾಗಿ 2020-21 ನೇ ಸಾಲಿನಲ್ಲಿ ಫೆಬ್ರವರಿ-2021 ರ ಮಾಹೆಯವರೆಗೂ ರೂ.8204.38 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

	(ತಾಲ್ಲೂಕುವಾರು ವಿವರ ನೀಡುವುದು)	ರಾಜ್ಯದ ಪಡಿತರ ಹಂಚಿಕೆಯಲ್ಲಿ ಕೇಂದ್ರ ಸರ್ಕಾರದಿಂದ ಎನ್. ಎಫ್. ಎಸ್ .ಎ ಅಕ್ಕಿಯನ್ನು ಪ್ರತಿ ಕೆ.ಜಿ.ಗೆ ರೂ.3/- ರ ದರದಲ್ಲಿ ಖರೀದಿಸಿ ಹಾಗೂ ಇತರೆ ವೆಚ್ಚ ಪ್ರತಿ ಕೆ.ಜಿಗೆ ರೂ.2.35/- ರಂತೆ ಸೇರಿಸಿ ಒಟ್ಟು ರೂ.5.35/- ಪ್ರತಿ ಕೆ.ಜಿಗೆ ವೆಚ್ಚವಾಗುತ್ತಿದ್ದು ಇದನ್ನು ರಾಜ್ಯ ಸರ್ಕಾರದಿಂದಲೇ ವೆಚ್ಚಭರಿಸಲಾಗುತ್ತಿದೆ ಹಾಗೂ ರಾಜ್ಯದ್ಯಲ್ಲಿ ಹೆಚ್ಚುವರಿಯಾಗಿ ಪ್ರತಿ ಆದ್ಯಾತಾ ಪಡಿತರ ಚೀಟಿಗೆ 2 ಕೆ.ಜಿ ಗೋಧಿಯನ್ನು ರಾಜ್ಯ ಸರ್ಕಾರದ ಅನುದಾನದಲ್ಲಿ ಉಚಿತವಾಗಿ ಹಂಚಿಕೆ ನೀಡಲಾಗುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ತಾಲ್ಲೂಕುವಾರು ವಿತರಣಾ ಪ್ರಮಾಣದ ವಿವರವನ್ನು ಲಗತ್ತಿಸಿದೆ. ಮತ್ತು ಇಲಾಖೆಯಿಂದ ಅನುದಾನವನ್ನು ಜಿಲ್ಲಾ ಘಟಕ ಕಚೇರಿಗಳಿಗೆ ಬಿಡುಗಡೆ ಮಾಡಲಾಗುತ್ತಿದೆ, ತಾಲ್ಲೂಕುವಾರ ಅನುದಾನವನ್ನು ಬಿಡುಗಡೆಯಾಗುವುದಿಲ್ಲ.

ಆನಾಸ 107 ಡಿಆರ್‌ಎ 2021 (ಇ-ಆಫೀಸ್)

(ಉಮೇಶ ವಿ. ಕತ್ತಿ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.